ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 21ನೇ ಮಾರ್ಚ್, 2020

ಕಲಬುರಗಿ ಕರ್ನಾಟಕ ಸೆಂಟ್ರಲ್ ಯುನಿವರ್ಸಿಟಿ ನೇಮಕಾತಿ ಕುರಿತು

ಶ್ರೀ ಅಲ್ಲಂ ವೀರಭದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು)

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ)

ಡಾ. ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)

224 (1707) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕಲಬುರಗಿಯಲ್ಲಿರುವ ಕರ್ನಾಟಕ ಸೆಂಟ್ರಲ್ ಯುನಿವರ್ಸಿಟಿಯಲ್ಲಿ ಇರುವ 30 ವಿಭಾಗಗಳಲ್ಲಿ 67 ಪ್ರಾಧ್ಯಾಪಕರು ಮತ್ತು ಸಹ ಪ್ರಾಧ್ಯಾಪಕರುಗಳ ನೇಮಕಾತಿಯನ್ನು ಯು.ಜಿ.ಸಿ. ಮಾರ್ಗಸೂಚಿಗೆ ವಿರುದ್ಧವಾಗಿ ನೇಮಕಾತಿ ಮಾಡಲಾಗಿದೆಯೇ ;

(ಆ) ಸದರಿ ಹುದ್ದೆಗೆ ಅವಶ್ಯ ಇರುವ ವಿದ್ಯಾರ್ಹತೆಯನ್ನು ಗಣನೆಗೆ ತೆಗೆದುಕೊಳ್ಳದಿರುವುದು ಹಾಗೂ ಅರ್ಹ ಅಭ್ಯರ್ಥಿಗಳು ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಪ್ರಕ್ರಿಯೆಯನ್ನು ತಡೆಹಿಡಿಯುವ ಬಗ್ಗೆ ಮತ್ತು ನ್ಯಾಯ ಸಮ್ಮತವಾಗಿ ಯು.ಜಿ.ಸಿ. ಮಾರ್ಗಸೂಚಿಯನ್ವಯ ನೇಮಕಾತಿ ಪ್ರಕ್ರಿಯೆ ನಡೆಸುವ ಬಗ್ಗೆ ಸರ್ಕಾರದ ಚಿಂತನೆಯಲ್ಲಿದೆಯೇ ? (ಹೆಸರು ಹಾಗೂ ಹುದ್ದೆಗಳ ಸಮೇತ ವಿವರವನ್ನು ಒದಗಿಸುವುದು)